# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1780 |
| ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 19/03/2021 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರ ರಾಷ್ಟ್ರೀಯ ಬಾಲವಾಡಿ ಶಿಶು ಕೇಂದ್ರ ಯೋಜನೆಯನ್ನು ( National Creche Scheme) ಸರ್ಕಾರ ಜಾರಿಗೆ ತಂದಿದೆಯೇ; (ಯೋಜನೆವಾರು ವಿವರ ನೀಡುವುದು) | "ರಾಷ್ಟ್ರೀಯ ಬಾಲವಾಡಿ ಯೋಜನೆ" (National Creche Scheme) ಯನ್ನು ಈ ಮೊದಲು ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿಯು ಅನುಷ್ಠಾನಗೊಳಿಸುತ್ತಿದ್ದು, ದಿನಾಂಕ: 01-01-2017 ರಿಂದ ಸದರಿ ಯೋಜನೆಯನ್ನು ಇಲಾಖೆಗೆ ನೀಡಲಾಗಿರುತ್ತದೆ.<br><br>ತಾಯಂದಿರು ಕೆಲಸಕ್ಕೆ ಹೋದ ಸಮಯದಲ್ಲಿ 6 ತಿಂಗಳಿಂದ 3 ವರ್ಷದ ಮಕ್ಕಳನ್ನು ಸುರಕ್ಷಿತವಾಗಿ ನೋಡಿಕೊಳ್ಳುವುದು ಯೋಜನೆಯ ಉದ್ದೇಶವಾಗಿದೆ.<br><br>ಈ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಸರ್ಕಾರ 60%, ರಾಜ್ಯ ಸರ್ಕಾರ 30% ಹಾಗೂ ಸ್ವಯಂಸೇವಾ ಸಂಸ್ಥೆ 10% ಪಾಲುದಾರಿಕೆಯೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ಈ ಯೋಜನೆ ಅಡಿಯಲ್ಲಿ ರಾಜ್ಯ ಸರ್ಕಾರ ನಡೆಸುತ್ತಿರುವ ಬಾಲವಾಡಿ/ ಶಿಶುಕೇಂದ್ರ ಮತ್ತು ದಿನದ ಆರೈಕೆ ಕೇಂದ್ರಗಳ (Creches and Day Care Centres) ಸಂಖ್ಯೆ ಎಷ್ಟು; ಮತ್ತು ಈ ಕೇಂದ್ರಗಳಲ್ಲಿ ನೋಂದಾಯಿತ ಫಲಾನುಭವಿಗಳೆಷ್ಟು; ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು; | ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯಡಿ ಪ್ರಸ್ತುತ 544 ಶಿಶುಪಾಲನಾ ಕೇಂದ್ರಗಳನ್ನು ಸ್ವಯಂಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.<br><br>ಕಳೆದ ಮೂರು ವರ್ಷಗಳಲ್ಲಿ ಶಿಶುಪಾಲನಾ ಕೇಂದ್ರಗಳಲ್ಲಿ ನೋಂದಾಯಿತ ಫಲಾನುಭವಿಗಳ ವಿವರ ಈ ಕೆಳಕಂಡಂತಿದೆ. |

| ವರ್ಷ | ನೊಂದಾಯಿತ ಫಲಾನುಭವಿಗಳ ಸಂಖ್ಯೆ |
|---|---|
| 2017-18 | 14725 |
| 2018-19 | 14725 |
| 2019-20 | 13251 |
| ಒಟ್ಟು | 42701 |

**ಇ)** ಈ ಯೋಜನ ಅಡಿಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕಳೆದ ಮೂರು ವರ್ಷಗಳಲ್ಲಿ ಮತ್ತು ಪ್ರಸಕ್ತ ವರ್ಷದಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಬಿಡುಗಡೆ ಮಾಡಿದ ಅನುದಾನದ ವಿವರ ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

| ವರ್ಷ | ರಾಜ್ಯ ಸರ್ಕಾರದ ಅನುದಾನ | ಕೇಂದ್ರ ಸರ್ಕಾರದ ಅನುದಾನ | ಒಟ್ಟು |
|---|---|---|---|
| 2017-18 | 135.00 | 400.43 | 535.43 |
| 2018-19 | 277.88 | 480.70 | 758.58 |
| 2019-20 | 136.16 | 272.33 | 408.49 |
| ಒಟ್ಟು | 414.04 | 752.13 | 1702.50 |

**ಈ)** ಲಿಂಗ-ಸಮಾನತೆ ಸರಿದೂಗಿಸಲು ಮತ್ತು ಆರ್ಥಿಕ ವ್ಯವಸ್ಥೆಯಲ್ಲಿ ಮಹಿಳೆಯರು ಸಕ್ರಿಯವಾಗಿ ಪಾಲ್ಗೊಳ್ಳಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕ್ರಮಗಳು ಯಾವುವು? (ಸಂಪೂರ್ಣ ವಿವರ ನೀಡುವುದು)

ಲಿಂಗ-ಸಮಾನತೆ ಸರಿದೂಗಿಸಲು ಮತ್ತು ಆರ್ಥಿಕ ವ್ಯವಸ್ಥೆಯಲ್ಲಿ ಮಹಿಳೆಯರು ಸಕ್ರಿಯವಾಗಿ ಪಾಲ್ಗೊಳ್ಳಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕ್ರಮಗಳು ಈ ಕೆಳಕಂಡಂತಿವೆ.

1. ರಾಜ್ಯ ಸರ್ಕಾರದಿಂದ ಸ್ವಸಹಾಯ ಗುಂಪುಗಳ ಮೂಲಕ ಗ್ರಾಮೀಣ ಮಹಿಳೆಯರ ಸಬಲೀಕರಣದ ಧ್ಯೆಯದೊಂದಿಗೆ 2000-01ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.
2. ಬೇಟಿ ಬಚಾವೊ ಬೇಟಿ ಪಡಾವೋ ಕಾರ್ಯಕ್ರಮವನ್ನು 5 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.
3. ರಾಜ್ಯ ಸರ್ಕಾರದಿಂದ ಭಾಗ್ಯಲಕ್ಷ್ಮಿ ಯೋಜನೆಯನ್ನು 2006-07ರಿಂದ ಅನುಷ್ಟಾಗೊಳಿಸಲಾಗುತ್ತಿದೆ.

ಮೇಲ್ಕಂಡ ಯೋಜನೆಗಳ ವಿವರವನ್ನು ಅನುಬಂಧ ದಲ್ಲಿ ಒದಗಿಸಲಾಗಿದೆ.

ಸಂಖ್ಯೆ: ಮಮಇ 122 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ವಿಧಾನ ಪರಿಷತ್ತು ಪ್ರಶ್ನೆ ಸಂಖ್ಯೆ:1780 ರ ಅನುಬಂಧ

## 1. ಸ್ತ್ರೀಶಕ್ತಿ ಯೋಜನೆ

ಸ್ವ-ಸಹಾಯ ಗುಂಪುಗಳ ಮೂಲಕ ಗ್ರಾಮೀಣ ಮಹಿಳೆಯರ ಸಬಲೀಕರಣದ ಧ್ಯೇಯದೊಂದಿಗೆ 2000-2001ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಸ್ತ್ರೀಶಕ್ತಿ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ ಸಮಾಜದ ಬಡ ಕುಟುಂಬದ, ಸಾಮಾಜಿಕ ಅಥವಾ ಆರ್ಥಿಕ ಹಿನ್ನೆಲೆಯುಳ್ಳ ಸಮಾನ ಮನಸ್ಸಿನ ಪರಿಸ್ಪರ ವಿಶ್ವಾಸದಿಂದ ಕೂಡಿರುವ ಭೂರಹಿತ ಮಹಿಳಾ ಕೃಷಿ ಕಾರ್ಮಿಕರು, ಪರಿಶಿಷ್ಟ ಜಾತಿ ಅಥವಾ ವರ್ಗಕ್ಕೆ ಸೇರಿದ ಕುಟುಂಬದ 15-20 ಮಹಿಳೆಯರನ್ನು ಒಟ್ಟು ಸೇರಿಸಿ 165960 ಲಕ್ಷ ಗುಂಪುಗಳನ್ನು ಹಂತಹಂತವಾಗಿ ರಚಿಸಲಾಗಿದೆ.

ಪ್ರಾರಂಭದಲ್ಲಿ ಪ್ರತಿ ಗುಂಪಿಗೆ ರೂ.5000/- ಗಳಂತೆ ಸುತ್ತುನಿಧಿಯನ್ನು ನೀಡಲಾಗಿದೆ. 2014-15ನೇ ಸಾಲಿನಿಂದ ಸರ್ಕಾರದ ಆದೇಶದನ್ವಯ ಪ್ರತಿ ವರ್ಷ ರೂ.5,000/- ಗಳಂತೆ ಒಟ್ಟು ರೂ.25,000/- ಗಳಿಗೆ ಸಿಮಿತವಾಗುವಂತೆ ಹೆಚ್ಚುವರಿ ಸುತ್ತುನಿಧಿಯನ್ನು ಸಹ ನೀಡಲಾಗಿದೆ. ಸದರಿ ಸುತ್ತುನಿಧಿಯನ್ನು ಗುಂಪಿನ ಸದಸ್ಯರು ಆದಾಯೋತ್ಪನ್ನ ಚಟುವಟಿಕೆಗಳಿಗೆ ಉಪಯೋಗಿಸಿಕೊಂಡು ವಿವಿಧ ರೀತಿಯ ಚಟುವಟಿಕೆಗಳನ್ನು ಹಮ್ಮಿಕೊಂಡು ಉತ್ಪಾದನೆಗೆ ಮೂಲ ಬಂಡವಾಳವಾಗಿ ಉಪಯೋಗಿಸುತ್ತಾರೆ.

ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿರುವ ಸ್ತ್ರೀಶಕ್ತಿ ಗುಂಪುಗಳಿಗೆ, ಕೌಶಲ್ಯಾಭಿವೃದ್ಧಿ ತರಬೇತಿ, ಪ್ರೋತ್ಸಾಹಧನ, ಅಧಿಕ ಉಳಿತಾಯ ಮಾಡಿರುವ ಗುಂಪುಗಳಿಗೆ ಪ್ರೋತ್ಸಾಹಧನ, ಸ್ತ್ರೀಶಕ್ತಿ ಗುಂಪುಗಳು ಬ್ಯಾಂಕ್‌ನಿಂದ ಪಡೆದ ಸಾಲಕ್ಕೆ ಶೇ.6ರ ಬಡ್ಡಿ ಸಹಾಯಧನ, , ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಬ್ಯಾಂಕ್ ಲಿಂಕೇಜ್ ಅತ್ಯುತ್ತಮ ಗುಂಪು ಮತ್ತು ಒಕ್ಕೂಟಗಳಿಗೆ ಪ್ರಶಸ್ತಿ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಸ್ತ್ರೀಶಕ್ತಿ ಗುಂಪುಗಳ ಬಲವರ್ಧನಾ ಉದ್ದೇಶದಿಂದ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಸ್ತ್ರೀಶಕ್ತಿ ಒಕ್ಕೂಟಗಳನ್ನು 2005-06ನೇ ಸಾಲಿನಲ್ಲಿ ಹಾಗೂ "ಸ್ತ್ರೀಶಕ್ತಿ ಸಮೃದ್ಧಿ" ಯೋಜನೆಯಡಿ 2016-17ನೇ ಸಾಲಿನಲ್ಲಿ ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟಗಳನ್ನು ರಚಿಸಲಾಗಿದೆ. ಅವುಗಳ ಕಾರ್ಯನಿರ್ವಹಣೆಗೆ 165 ತಾಲ್ಲೂಕು ಭವನಗಳನ್ನು ಹಾಗೂ 28 ಜಿಲ್ಲಾ ಭವನಗಳನ್ನು ಇಲಾಖೆಯಿಂದ ನಿರ್ಮಿಸಲಾಗಿದೆ. ಈ ಭವನಗಳಲ್ಲಿ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತಯಾರಿಸಿರುವ ಉತ್ಪನ್ನಗಳನ್ನು ಮಾರಾಟ ಮಾಡಲು ಹಾಗೂ ಸ್ತ್ರೀಶಕ್ತಿ ಗುಂಪು/ಒಕ್ಕೂಟಗಳ ಸಭೆ ಸಮಾರಂಭಗಳನ್ನು ಮತ್ತು ತರಬೇತಿಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅವಕಾಶ ಕಲ್ಪಿಸಿಕೊಡಲಾಗಿದೆ.

ಅಲ್ಲದೆ ಪ್ರತಿ ವರ್ಷ ಪ್ರತಿ ಜಿಲ್ಲೆಗೆ ರೂ.75,000/- ಗಳನ್ನು ಬಿಡುಗಡೆಗೊಳಿಸಿ ಜಿಲ್ಲಾ ಮಟ್ಟದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ಏರ್ಪಸಲಾಗುತ್ತಿದೆ. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ', ' ಮಕ್ಕಳ ಹಬ್ಬ', 'ಮಕ್ಕಳ ದಿನಾಚರಣೆ', ಸಂದರ್ಭಗಳಲ್ಲೂ ಸಹ ಸ್ತ್ರೀಶಕ್ತಿ ಗುಂಪುಗಳಿಂದ ಮಳಿಗೆಗಳನ್ನು ನಿರ್ಮಿಸಿ ಅವರ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿಕೊಡಲಾಗುತ್ತಿದೆ.

152

## 2. ಭಾಗ್ಯಲಕ್ಷ್ಮಿ ಯೋಜನೆ:-

ಭಾಗ್ಯಲಕ್ಷ್ಮಿ ಯೋಜನೆಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಒಂದು ಪ್ರಮುಖ ಯೋಜನೆಯಾಗಿದ್ದು, ಇದು ಹೆಣ್ಣು ಮಗು ಇರುವಂಥಹ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಲಿಂಗಾನುಪಾತವನ್ನು ಉತ್ತಮಗೊಳಿಸಲು ರಾಜ್ಯವು ಗುರಿಯಿಟ್ಟುಕೊಂಡಿದೆ ಮತ್ತು ಇದಕ್ಕೆ ಪ್ರತಿಯಾಗಿ ಸಾಮಾಜಿಕ ಪಿಡುಗುಗಳಾದ ಬಾಲಕಾರ್ಮಿಕತೆ ಹೆಣ್ಣು ಮಕ್ಕಳ ಭ್ರೂಣ ಹತ್ಯೆ, ಬಾಲ್ಯ ವಿವಾಹ, ಮಕ್ಕಳ ಸಾಗಾಣಿಕೆಯ ನಿರ್ಮೂಲನೆಗೆ ಪ್ರಯತ್ನಿಸುತ್ತಿದೆ. ಮಕ್ಕಳ ಅಭಿವೃದ್ಧಿಯ ಸೂರಿನಡಿಯಲ್ಲಿ ಬರುವ ಈ ಕಾರ್ಯಕ್ರಮದಲ್ಲಿ ಬಡ ಕುಟುಂಬದಲ್ಲಿ ಜನಿಸಿದ 2 ಹೆಣ್ಣು ಮಕ್ಕಳಿಗೆ ಆರ್ಥಿಕ ಸಹಾಯವನ್ನು ನೀಡಲಾಗುವುದು.

ಈ ಆರ್ಥಿಕ ಸಹಾಯದ ಮೊಬಲಗನ್ನು 2006-07 ರಿಂದ 2019-20ರವರೆಗೆ ಪಾಲುದಾರ ಹಣಕಾಸು ಸಂಸ್ಥೆಯಾದ ಭಾರತೀಯ ಜೀವ ವಿಮಾ ನಿಗಮದಲ್ಲಿ ಮಗುವಿನ ಹೆಸರಿನಲ್ಲಿ ಠೇವಣಿ ಹೂಡಿ ಮಗುವಿಗೆ 18 ವರ್ಷ ತುಂಬಿದ ನಂತರ ಬಡ್ಡಿ ಸಮೇತ ಪರಿಪಕ್ವ ಮೊತ್ತವನ್ನು ನೀಡಲಾಗುವುದು.

ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಬರುವ ಫಲಾನುಭವಿಗಳ ದಾಖಲೆಗಳನ್ನು 18 ವರ್ಷದವರೆಗೆ ನಿಗಾವಹಿಸಲು ಚೈಲ್ಡ್ ಟ್ರ್ಯಾಕಿಂಗ್ ಪದ್ಧತಿಯ ತಂತ್ರಾಂಶವನ್ನು ಎನ್.ಐ.ಸಿ. ಸಂಸ್ಥೆಯ ಸಹಕಾರದೊಂದಿಗೆ ಅಭಿವೃದ್ಧಿ ಪಡಿಸಲಾಗಿರುತ್ತದೆ. ಈ ಸಾಫ್ಟ್‌ವೇರ್‌ನಲ್ಲಿ ಮಗುವಿನ ಆರೋಗ್ಯ, ಶಿಕ್ಷಣ, ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವಲಸೆ ಹೋಗುವುದು ಮತ್ತು ಬೇರೆ ಇಲಾಖೆಗಳಿಂದ ಪಡೆದುಕೊಂಡ ಇನ್ನಿತರೆ ಸೌಲಭ್ಯಗಳನ್ನು ಮಗುವಿಗೆ 18 ವರ್ಷ ತುಂಬುವವರೆಗೆ ವೀಕ್ಷಿಸಬಹುದಾಗಿದೆ. ದಿನಾಂಕ: 24-02-2018ರ ಸರ್ಕಾರದ ಆದೇಶದ ಮಾನದಂಡದಂತೆ, ಈ ಯೋಜನೆಯ ಸೌಲಭ್ಯಕ್ಕಾಗಿ ನೋಂದಾಯಿಸಿಕೊಳ್ಳಲು ಮಗು ಜನಿಸಿದ 2 ವರ್ಷಗಳವರೆಗೆ ಅವಧಿಯನ್ನು ವಿಸ್ತರಿಸಲಾಗಿದೆ.

### ಭಾಗ್ಯಲಕ್ಷ್ಮಿ -ಸುಕನ್ಯಾ ಸಮೃದ್ಧಿ ಖಾತೆ ಯೋಜನೆ (2020-21)

2006-07 ರಿಂದ 2019-20 ನೇ ಸಾಲಿನವರೆಗೆ ಭಾರತೀಯ ಜೀವ ವಿಮಾ ನಿಗಮವು ಪಾಲುದಾರ ಹಣಕಾಸುಸಂಸ್ಥೆಯಾಗಿದ್ದು, 2020-21ನೇ ಸಾಲಿನಿಂದ ಆಡಳಿತಾತ್ಮಕ ಕಾರಣಗಳಿಂದ ಭಾಗ್ಯಲಕ್ಷ್ಮಿ ಯೋಜನೆಯನ್ನು ಅಂಚೆ ಇಲಾಖೆಯ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯ ಮೂಲಕ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ 2020-21ನೇ ಸಾಲಿನಲ್ಲಿ ರೂ.100.00ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ. ಭಾಗ್ಯಲಕ್ಷ್ಮಿ ಯೋಜನೆಯ ಹೆಸರು, ಫಲಾನುಭವಿಗಳ ನೋಂದಣಿಗೆ ಷರತ್ತುಗಳು ಹಿಂದಿನಂತೆಯೇ ಮುಂದುವರೆಯುತ್ತವೆ.

ಸದರಿ ಯೋಜನೆಯಡಿ ಬಿಪಿಎಲ್ ಕುಟುಂಬದ 2 ಹೆಣ್ಣು ಮಕ್ಕಳಿಗೆ ಪ್ರತಿ ಮಗುವಿನ ಹೆಸರಿನಲ್ಲಿ ರೂ.3000/-ದಂತೆ 15 ವರ್ಷಗಳವರೆಗೆ ಒಟ್ಟು ರೂ.45,000/-ಗಳನ್ನು ಠೇವಣಿ ಹೂಡಲಾಗುತ್ತದೆ. 21 ವರ್ಷ ಅವಧಿ ಪೂರ್ಣಗೊಂಡ ನಂತರ ಅಂದಾಜು ಪರಿಪಕ್ವ ಮೊತ್ತ ರೂ.1.27ಲಕ್ಷ ಪ್ರಸ್ತುತ ಬಡ್ಡಿ ಸೇರಿದಂತೆ ನೀಡಲಾಗುತ್ತದೆ. 10ನೇ ತರಗತಿ ನಂತರ ಉನ್ನತ ವಿದ್ಯಾಭ್ಯಾಸಕ್ಕಾಗಿ ಖಾತೆಯಲ್ಲಿರುವ ಮೊತ್ತದ ಶೇ.50ರಷ್ಟು ಭಾಗವನ್ನು ಹಿಂಪಡೆಯಲು ಅವಕಾಶವಿರುತ್ತದೆ.

ದಿನಾಂಕ 10-11-2020ರ ಸರ್ಕಾರದ ಆದೇಶದಲ್ಲಿ ಯೋಜನೆಯನ್ನು ಮರುವಿನ್ಯಾಸಗೊಳಿಸಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ಆದೇಶವನ್ನು ಹೊರಡಿಸಿದೆ. ಪ್ರಸ್ತುತ 2020-21ನೇ ಸಾಲಿನಲ್ಲಿ 156056 ಫಲಾನುಭವಿಗಳ ಸೌಲಭ್ಯಕ್ಕಾಗಿ ರೂ.46.82 ಕೋಟಿಗಳ ಅನುದಾನವು ಬಿಡುಗಡೆಯಾಗಿರುತ್ತದೆ.

3.ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ : ಲೆಕ್ಕಶೀರ್ಷಿಕೆ:2235-02-102-0-41-19(ಇತರೆ ಖರ್ಚು) ಸನ್ಮಾನ್ಯ ಪ್ರಧಾನ ಮಂತ್ರಿಗಳು "ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ" (Beti Bachao, Beti Padhao) ಎಂಬ ಹೊಸ ಯೋಜನೆಯನ್ನು 22 ಜನವರಿ 2015ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು (Declining CSR) ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, "ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆಯ ಮುಖ್ಯ ಉದೇಶವಾಗಿರುತ್ತದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು, ಮಕ್ಕಳ ಲಿಂಗಾನುಪಾತ ಇಳಿಮುಖವಾಗುತ್ತಿರುವ ಭಾರತದ 100 ಜಿಲ್ಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಇದರಲ್ಲಿ ಕರ್ನಾಟಕ ರಾಜ್ಯದ ವಿಜಯಪುರ ಜಿಲ್ಲೆಯು ಒಂದಾಗಿದೆ. ಈ ಯೋಜನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಗಳ ಸಹಕಾರದಿಂದ ಅನುಷ್ಠಾನಗೊಳಿಸಲಾಗುತ್ತದೆ.

<u>ಉದ್ದೇಶ :</u>

- ➢ ಲಿಂಗ ಪಕ್ಷಪಾತ ಮತ್ತು ಲಿಂಗ ಆಯ್ಕೆ ಮಾಡುವುದನ್ನು ತಡೆಗಟ್ಟುವುದು (Prevent Gender Sex Selective Elimination)
- ➢ ಹೆಣ್ಣು ಮಕ್ಕಳ ಉಳಿವು ಮತ್ತು ಅವರ ರಕ್ಷಣೆಯನ್ನು ಖಾತ್ರಿಗೊಳಿಸುವುದು(Ensure Survival and Protection of The Girl Child )
- ➢ ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ಖಾತ್ರಿಗೊಳಿಸುವುದು(Ensure Education of Girl Child)

2018-19 ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ 5 ಜಿಲ್ಲೆಗಳಾದ **ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ದಕ್ಷಿಣ ಕನ್ನಡ** ಜಿಲ್ಲೆಗಳನ್ನು ಮಲ್ಟಿಸೆಕ್ಟೋರಲ್ ಇಂಟರ್‌ವೆನ್ಶನ್ (Multisectotal Intervention and Media advocacy outreach) ಕಾರ್ಯಕ್ರಮಕ್ಕಾಗಿ ಹಾಗೂ ಉಳಿದ 5 ಜಿಲ್ಲೆಗಳನ್ನು ಮಾಧ್ಯಮ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳಿಗಾಗಿ (Only Media advocacy outreach) ಕೇಂದ್ರ ಸರ್ಕಾರದಿಂದ ಆಯ್ಕೆ ಮಾಡಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ಈ ಕಾರ್ಯಕ್ರಮದ ಅನುಷ್ಠಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕೆಳಕಂಡ 5 ಜಿಲ್ಲೆಗಳಿಗೆ ಕೇಂದ್ರ ಸರ್ಕಾರದಿಂದ ತಲಾ ರೂ.50.00ಲಕ್ಷ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ.

ಈ ಕಾರ್ಯಕ್ರಮದ ಅನುಷ್ಠಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕೆಳಕಂಡ 5 ಜಿಲ್ಲೆಗಳಿಗೆ ಕೇಂದ್ರ ಸರ್ಕಾರದಿಂದ ತಲಾ ರೂ.25.00ಲಕ್ಷ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ ಹಾಗೂ ಫೆಬ್ರವರಿ 2021ರ ಅಂತ್ಯಕ್ಕೆ 85.60 ಲಕ್ಷಗಳ ವೆಚ್ಚ ಭರಿಸಲಾಗಿದೆ.